# All India Radio: Bangalore
# Regional Bulletin In Kannada
# 16.02.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 16.02.2025 / 6.40 p.m.

**<><><><>**

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ೧ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಶಾಶ್ವತ ಯೋಜನೆ
- ಲೋಕಸಭಾ ಚುನಾವಣೆವರೆಗೆ ಸಿದ್ದರಾಮಯ್ಯನವರೇ ನಮ್ಮ ನಾಯಕ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟನೆ
- ರಾಜ್ಯದಲ್ಲಿ ಒಂಬತ್ತು ವಿಶ್ವವಿದ್ಯಾಲಯ ಮುಚ್ಚುವ ಸರ್ಕಾರದ ನಿರ್ಧಾರದ ವಿರುದ್ಧ ಬಿಜೆಪಿ ಆಕ್ಷೇಪ
- ಅಪಘಾತದಲ್ಲಿ ಗಾಯಗೊಂಡಿದ್ದ ರೈತ ಮುಖಂಡ ಕುರುಬೂರು ಶಾಂತಕುಮಾರ್ ಪಂಜಾಬಿನಿಂದ ಬೆಂಗಳೂರಿಗೆ ಏರ್ ಲಿಫ್ಟ್

<><><><>

ಬ್ರ್ಯಾಂಡ್ ಬೆಂಗಳೂರು ಸುಗಮ ಸಂಚಾರ ಯೋಜನೆಯಡಿಯಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ರಸ್ತೆಗಳನ್ನು ನಿರ್ಮಿಸಲು ವೈಟ್ ಟಾಪಿಂಗ್ ಮಾಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ವೈಟ್ ಟಾಪಿಂಗ್ ಕಾಮಗಾರಿ ಪರಿಶೀಲನೆ ವೇಳೆ ಮಾತನಾಡಿದ ಅವರು, ೩೦ ವರ್ಷಗಳ ಕಾಲ ಬಾಳಿಕೆ ಬರುವ ಶಾಶ್ವತ ರಸ್ತೆ ನಿರ್ಮಿಸುವ ಈ ಯೋಜನೆಗೆ ೧ ಸಾವಿರದ ೭೦೦ ಕೋಟಿ ರೂಪಾಯಿ ಹಣ ವೆಚ್ಚ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ. ಕಾಮಗಾರಿ ಪೂರ್ಣಗೊಳಿಸಲು ೧೧ ತಿಂಗಳ ಕಾಲಮಿತಿ ನಿಗದಿಪಡಿಸಲಾಗಿದೆ. ಬೇಸಿಗೆ ಆರಂಭವಾಗುತ್ತಿದ್ದು, ಬೆಂಗಳೂರು ನಗರದಲ್ಲಿ ನೀರಿನ ಅಭಾವ ಎದುರಾಗಬಾರದು ಎಂಬ ಹಿನ್ನೆಲೆಯಲ್ಲಿ ಕಾವೇರಿ ೫ನೇ ಹಂತದ ಕುಡಿಯುವ ನೀರಿನ ಯೋಜನೆ ಜಾರಿಗೆ ತರಲಾಗಿದೆ. ಜನರು ಇದರ ಸಂಪರ್ಕ ಪಡೆಯಬೇಕು ಎಂದು ಮನವಿ ಮಾಡಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಪಕ್ಷದ ನಾಯಕರಾಗಿದ್ದು, ಅವರ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವುದು ಬೇಡ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮಾತನಾಡಿದ ಅವರು, ಮುಂದಿನ ಪಂಚಾಯತ್ ಚುನಾವಣೆಯಿಂದ ಹಿಡಿದು, ಲೋಕಸಭೆ ಚುನಾವಣೆಯವರೆಗೆ ಅವರೇ ತಮ್ಮ ನಾಯಕರು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಯಾವುದೇ ಕ್ಷಣದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯುವ ಸಾಧ್ಯತೆ ಇದ್ದು ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಸಜ್ಜಾಗಬೇಕು" ಎಂದು ಅವರು ಕರೆ ನೀಡಿದ್ದಾರೆ. ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ಕೆಲ ನಾಯಕರು ಹಂತ ಹಂತವಾಗಿ ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದು ಇಂದು ಎಲ್.ಆರ್ ಶಿವರಾಮೇಗೌಡ ,ಬ್ರಿಜೇಶ್ ಕಾಳಪ್ಪ ಅವರು ತಮ್ಮ ಪಕ್ಷ ತೊರೆದು ಕಾಂಗ್ರೆಸ್ ಸೇರಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಪದವೀಧರರಿಗೆ "ಯುವ ನಿಧಿ" ಗ್ಯಾರೆಂಟಿ ಘೋಷಿಸಿದ ರಾಜ್ಯ ಸರ್ಕಾರ ಪದವೀಧರರನ್ನು ರೂಪಿಸೋ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿರುವುದು ಅಕ್ಷಮ್ಯ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ರಾಜ್ಯದೆಲ್ಲೆಡೆ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಕಲ್ಪಿಸಲು ೧೦ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗಿತ್ತು. ಸರ್ಕಾರ ಈಗ ಅವುಗಳನ್ನು ಮುಚ್ಚುವ ಮೂಲಕ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಕನಸಿಗೆ ತಣ್ಣೀರೆರಚಿದೆ ಎಂದು ದೂರಿದ್ದಾರೆ. ಇನ್ನೊಂದೆಡೆ, ಕಾಂಗ್ರೆಸ್ ಸರ್ಕಾರ 'ಜ್ಞಾನ ಗಂಗೆಯ ಆಲಯಗಳನ್ನು ಬರಿದು ಮಾಡಿ ಅಕ್ಷರ ದೀವಿಗೆಯನ್ನು ನಂದಿಸಲು ಹೊರಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಸಮಧಾನ ವ್ಯಕ್ತಪಡಿಸಿದರು.

<><><><>

ವಕೀಲಿ ವೃತ್ತಿ ನೊಬೆಲ್ ವೃತ್ತಿಯಾಗಿದ್ದು, ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ವಕೀಲರ ಪಾತ್ರ ತುಂಬಾ ಮಹತ್ವದ್ದಾಗಿದೆ ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರದ ಮುದ್ದೇಬಿಹಾಳ ನ್ಯಾಯಾಲಯದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ 'ಲಾ' ಚೇಂಬರ್ಸ್ ಮತ್ತು ಸಹಾಯಕ ಸರಕಾರಿ ಅಭಿಯೋಜಕರ ಕಚೇರಿಯ ಉದ್ಘಾಟನಾ

ಸಮಾರಂಭದಲ್ಲಿ ಮಾತನಾಡಿದ ಅವರು, ವಕೀಲರಾಗಿದ್ದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಭಾರತವನ್ನು ಬ್ರಿಟಿಷರ ದಾಸ್ಯದಿಂದ ಬಿಡುಗಡೆ ಗೊಳಿಸಿದರು ಎಂದು ಹೇಳಿದರು. ಇದೇ ವೇಳೆ, ಪಂಚ ಗ್ಯಾರಂಟಿಗಳಿಂದ ರಾಜ್ಯದ ಅಭಿವೃದ್ಧಿಗೆ ಯಾವುದೇ ಹಿನ್ನಡೆಯಾಗಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

<><><>

ಪಂಜಾಬಿನ ಪಟಿಯಾಲ ಬಳಿ ಸಂಭವಿಸಿದ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿರುವ ರೈತ ಮುಖಂಡ ಕುರುಬೂರು ಶಾಂತಕುಮಾರ್ ಅವರನ್ನು ಇಂದು ಏರ್ ಆಂಬುಲೆನ್ಸ್ ಮೂಲಕ ಬೆಂಗಳೂರಿಗೆ ಕರೆ ತರಲಾಗಿದೆ. ಚಿಕಿತ್ಸೆಗಾಗಿ ಶಾಂತಕುಮಾರ್ ಅವರನ್ನು ಮಣಿಪಾಲ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಶಾಂತಕುಮಾರ್ ಅವರು ಶೀಘ್ರ ಗುಣಮುಖರಾಗಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ  ಹಾರೈಸಿದ್ದಾರೆ. ಮೂರು ದಿನಗಳ ಹಿಂದೆ ಸಂಭವಿಸಿದ ಅಪಘಾತದಲ್ಲಿ ಶಾಂತಕುಮಾರ್ ಅವರು ಗಾಯಗೊಂಡು ಪಟಿಯಾಲದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ವಿಷಯ ತಿಳಿದ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏರ್ ಆಂಬುಲೆನ್ಸ್ ಮೂಲಕ ಶಾಂತಕುಮಾರ್ ಅವರನ್ನು ಬೆಂಗಳೂರಿಗೆ ಕರೆತರುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು ಇಬ್ಬರು ಸಹಾಯಕರು ಹಾಗೂ ವೈದ್ಯರ ತಂಡದೊಂದಿಗೆ ಇಂದು ಶಾಂತಕುಮಾರ್ ಅವರನ್ನು ಬೆಂಗಳೂರಿಗೆ ಕರೆತರಲಾಗಿದೆ.

<><><>

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್.ಸಿ.ಮಹದೇವಪ್ಪ ಇಂದು ನಂಜನಗೂಡು ಬಳಿಯ ಬಿದರಗೋಡಿನಲ್ಲಿರುವ ಜಲಶುದ್ದೀಕರಣ ಘಟಕಗಳ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು. ಈ ವೇಳೆ ಮಾತನಾಡಿದ ಅವರು, ಕಬಿನಿ ನೀರು ಸರಬರಾಜು ಯೋಜನೆಯನ್ನು ೩ ಹಂತದಲ್ಲಿ ಒಟ್ಟು ೧೮೪ ಎಂ.ಎಲ್.ಡಿ ಸಾರ್ಮಥ್ಯಕ್ಕೆ ಹೆಚ್ಚಿಸಲಾಗಿದೆ ಎಂದು ತಿಳಿಸಿದರು. ಮೈಸೂರು ಮಹಾನಗರ ಪಾಲಿಕೆ ಮತ್ತು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಸಹಭಾಗಿತ್ವದಲ್ಲಿ ಸದರಿ ಯೋಜನೆಯ ಸಾಮರ್ಥ್ಯವನ್ನು ಉನ್ನತ್ತೀಕರಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಹೇಳಿದರು. ಈ ಕಾಮಗಾರಿಯು ಪೂರ್ಣಗೊಂಡ ನಂತರ ಶುದ್ದೀಕರಣ ಘಟಕಗಳ ಸಾಮರ್ಥ್ಯ ೧೨೦ ಎಂ.ಎಲ್.ಡಿ ಗೆ ಮತ್ತು ಪಂಪಿಂಗ್ ಸಾಮರ್ಥ್ಯವು ೧೦೦ ಎಂ.ಎಲ್.ಡಿ ಗೆ

ಹೆಚ್ಚಳವಾಗಲಿದ್ದು, ಇದರಿಂದ ಮೈಸೂರು ನಗರಕ್ಕೆ ಸಾರ್ವಜನಿಕ ಬಳಕೆಗೆ ಹೆಚ್ಚುವರಿಯಾಗಿ ೪೦ ಎಂ.ಎಲ್.ಡಿ ನೀರು ಲಭ್ಯವಾಗಲಿದೆ ಎಂದು ಸ್ಪಷ್ಟಪಡಿಸಿದರು.

<><><><>

ಬಾಗಲಕೋಟೆ ಜಿಲ್ಲೆಯ ಮುಧೋಳ ತಾಲೂಕಿನ ರನ್ನ ಬೆಳಗಲಿಯಲ್ಲಿ ಒಂದು ದಿನ ಹಾಗೂ ಮುಧೋಳ ಪಟ್ಟಣದಲ್ಲಿ ಎರಡು ದಿನ ರನ್ನ ವೈಭವ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿ, ಮೂರು ದಿನಗಳ ಕಾಲ ಜರುಗುವ ಉತ್ಸವದಲ್ಲಿ ಕವಿ ಚರ್ಕವರ್ತಿ ರನ್ನನ ಸಾಹಿತ್ಯ ಕುರಿತಂತೆ ವಿಚಾರಗೋಷ್ಠಿ, ಕವಿಗೋಷ್ಠಿ ನಡೆಯಲಿವೆ ಎಂದು ಮಾಹಿತಿ ನೀಡಿದ್ದಾರೆ.

**ಧ್ವನಿ: ಜಾನಕಿ ಕೆ.ಎಂ.ಜಿಲ್ಲಾಧಿಕಾರಿ**

<><><><>

ನರೇಗಾ ಯೋಜನೆಯಡಿ ಬೆಳಗಾವಿ ಜಿಲ್ಲೆಯ ಪ್ರಸಕ್ತ ಸಾಲಿನ ಆದ್ಯತಾ ಕಾಮಗಾರಿಗಳಾದ ಶಾಲಾ ಶೌಚಾಲಯ, ಆಟದ ಮೈದಾನ, ಅಡುಗೆ ಕೋಣೆ, ಸೇರಿದಂತೆ ಹಲವು ಕಾಮಗಾರಿಗಳನ್ನು ಇದೇ ತಿಂಗಳ ಅಂತ್ಯದಲ್ಲಿ ಪೂರ್ಣಗೊಳಿಸಬೇಕೆಂದು ಬೆಳಗಾವಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ಹಕಾಧಿಕಾರಿ  ರಾಹುಲ್ ಶಿಂಧೆ ಸೂಚನೆ ನೀಡಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮಾನವ ದಿನ ಸೃಜನೆಯಲ್ಲಿ ೨೦೨೩-೨೪ ನೇ ಸಾಲಿಗೆ ಹೋಲಿಕೆ ಮಾಡಿದರೆ ಪ್ರಸಕ್ತ ಸಾಲಿಗೆ ೨೩ ಲಕ್ಷದ ೨೮ ಸಾವಿರ ಮಾನವ ದಿನಗಳು ಕುಂಠಿತವಾಗಿದೆ. ಈ ಹಿನ್ನೆಲೆಯಲ್ಲಿ ನರೇಗಾ ಯೋಜನೆಯಡಿ ಕಡ್ಡಾಯವಾಗಿ ಕೆಲಸ ನೀಡಿ ಪ್ರಗತಿ ಸಾಧಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><><>

ಅರೆಭಾಷಾ ಸಾಹಿತ್ಯ, ಸಂಸ್ಕೃತಿ ಮತ್ತು ಅದರ ಬೆಳವಣಿಗೆಯಲ್ಲಿ ಗಣನೀಯ ಸಾಧನೆ ಮಾಡಿದ ಆರು ಮಂದಿ ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿಯ ಗೌರವ ಪ್ರಶಸ್ತಿಗೆ ಪಾತ್ರರಾಗಿದ್ದಾರೆ. ಮಡಿಕೇರಿಯಲ್ಲಿ  ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅರೆಭಾಷಾ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ 'ಸಂಶೋಧನೆ ಮತ್ತು ಅರೆಭಾಷೆ ಸಾಹಿತ್ಯ' ಕ್ಷೇತ್ರದ ಸಾಧನೆಗಾಗಿ ಕೊಡಗಿನ ಡಾ.ಕಾವೇರಿಮನೆ ಬೋಜಪ್ಪ, 'ಅರೆಭಾಷೆ ಮತ್ತು ಸಂಸ್ಕೃತಿಯ ಸೇವೆ'ಗಾಗಿ ತುಂತಜೆ

ವೆಂಕಟೇಶ್ 'ಶಿಕ್ಷಣ ಮತ್ತು ವೈದ್ಯಕೀಯ ಸೇವೆ'ಗಾಗಿ ದಕ್ಷಿಣ ಕನ್ನಡ ಜಿಲ್ಲೆಯ ಡಾ.ಕೆ.ವಿ.ಚಿದಾನಂದ ಅವರು ೨೦೨೨ ನೇ ಸಾಲಿನ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಪ್ರಶಸ್ತಿ ಪ್ರದಾನ ಸಮಾರಂಭ ಇದೇ ೨೮ ರಂದು ಮಡಿಕೇರಿಯಲ್ಲಿ ನಡೆಯಲಿದೆ.

<><><><>

ಸಂಕ್ಷಿಪ್ತ ಸುದ್ದಿಗಳು-೧

1. ಮೂರ್ಛೆರೋಗದ ಬಗೆಗಿನ ಮೌಢ್ಯತೆಯಿಂದ ಜನಸಾಮಾನ್ಯರು ಹೊರಬರಬೇಕಿದೆ ಎಂದು ವಿಜಯನಗರ ಜಿಲ್ಲಾ ವೈದ್ಯಾಧಿಕಾರಿ ಡಾ.ಹರಿಪ್ರಸಾದ್ ಅಭಿಪ್ರಾಯಪಟ್ಟಿದ್ದಾರೆ. ಸರಿಯಾದ ಔಷಧಿಯನ್ನು ತೆಗೆದುಕೊಳ್ಳುವುದರಿಂದ ಮೂರ್ಛೆ ರೋಗವನ್ನು ಗುಣಪಡಿಸಲು ಸಾಧ್ಯ ಎಂದು ತಿಳಿಸಿದ್ದಾರೆ.
2. ಸಿ.ಎಸ್.ಆರ್ ಅನುದಾನವನ್ನು ಶಿಕ್ಷಣಕ್ಕೆ ಬಳಸಿಕೊಳ್ಳುವಂತೆ ಕೋಲಾರದ ಶಾಸಕ ಕೊತ್ತೂರು ಮಂಜುನಾಥ್ ತಿಳಿಸಿದ್ದಾರೆ. ವಿದ್ಯಾರ್ಥಿಗಳು ಸಮಾಜದ ಆಸ್ತಿಯಾಗಿದ್ದು, ಪ್ರತಿಯೊಬ್ಬರು ಉನ್ನತ ಶಿಕ್ಷಣ ಪಡೆಯುವಂತಾಗಬೇಕು ಎಂದು ತಿಳಿಸಿದ್ದಾರೆ.
3. ಅಟಲ್ ಭೂಜಲ ಯೋಜನೆಯಡಿ ಸಮುದಾಯ ಸಹಭಾಗಿತ್ವದೊಂದಿಗೆ ಅಂತರ್ಜಲ ನಿರ್ವಹಣೆ, ಹಾಗೂ ನೀರಿನ ಮರು ಪೂರೈಕೆ ಕ್ರಮಗಳ ಕುರಿತು ಗದಗ ಜಿಲ್ಲೆಯ ರೈತರಿಗೆ ಇದೇ ೧೮ ಮತ್ತು ೧೯ ರಂದು ತರಬೇತಿ ಕಾರ್ಯಕ್ರಮ ನಡೆಯಲಿದೆ ಎಂದು ಗದಗ ಜಿಲ್ಲಾ ಕೃಷಿ ಇಲಾಖೆಯ ಜಂಟಿ ನಿರ್ದೇಶಕಿ ತಾರಾಮಣಿ ಜಿ ಎಚ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
4. ಗ್ರಾಮೀಣ ಅಂಚೆ ಸೇವಕರ ನೇಮಕಾತಿಗೆ ಸಂಬಂಧಿಸಿದಂತೆ ಕಾರವಾರ ಅಂಚೆ ವಿಭಾಗದಲ್ಲಿ ಒಟ್ಟೂ ೩೨ ಖಾಲಿ ಇರುವ ಶಾಖಾ ಅಂಚೆ ಪಾಲಕ, ಸಹಾಯಕ ಶಾಖಾ ಅಂಚೆ ಪಾಲಕ ಮತ್ತು ಡಾಕ್ ಸೇವಕ್ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.
5. ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ವಿವಾಹ ಸಮಾರಂಭ ಸೇರಿದಂತೆ ಇತರೆ ಖಾಸಗಿ ಕಾರ್ಯಕ್ರಮಗಳಲ್ಲಿ ಮದ್ಯ ಬಳಕೆಗೆ ಒಂದು ದಿನದ ಸನ್ನದು ಪಡೆಯುವುದು ಕಡ್ಡಾಯವೆಂದು ಅಬಕಾರಿ ಇಲಾಖೆ ಉಪ ಆಯುಕ್ತರು ತಿಳಿಸಿದ್ದಾರೆ.

6. ಸಂತ ಸೇವಾಲಾಲ್ ಅವರ ತತ್ವ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಅವರ ಹಾದಿಯಲ್ಲಿ ನಾವೆಲ್ಲ ಸಾಗಬೇಕು ಎಂದು ಮಂಡ್ಯ ಶಾಸಕ ರವಿಕುಮಾರ್ ಗಣಿಗ ಹೇಳಿದ್ದಾರೆ.
7. ದಕ್ಷಿಣ ಕನ್ನಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಸಂತ ಸೇವಾಲಾಲ್ ಜಯಂತಿ ಇಂದು ಮಂಗಳೂರಿನ ಕುದ್ಮುಲ್ ರಂಗರಾವ್ ಪುರಭವನದಲ್ಲಿ ನಡೆಯಿತು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>